ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31.3.2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆ ಕ್ರಮಾಂಕ 27 – ಕಾನೂನು ಇಲಾಖೆ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ 10.00 ಲಕ್ಷ ರೂಪಾಯಿಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

11. ಶಾಸನ ರಚನೆ

ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ 1) 2008

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕ ಮಂಡಿಸಲಾಗಿದೆ.

(ಅನುಬಂಧ – VI)

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನ ವಿನಿಯೋಗ ವಿಧೇಯಕ (ಸಂಖ್ಯೆ 1) 2008

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2008ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು: ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಸೇರಿದಂತೆ ವಿಧೇಯಕದ ಅಂಗವಾಯಿತು.)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2008ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 6 ಗಂಟೆ 37 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 31ನೇ ಜುಲೈ 2008ರ ಗುರುವಾರದಂದು ಬೆಳಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು.)

****

ಅನುಬಂಧ–I

ಕರ್ನಾಟಕ ಧನವಿನಿಯೋಗ ವಿಧೇಯಕ, 2008

(2008ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 5)

2008–2009ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ವಿಧೇಯಕ.